# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 710 |
| ಸದಸ್ಯರ ಹೆಸರು | : ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 21.08.2026 |
| ಉತ್ತರಿಸುವ ಸಚಿವರು | : ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಾರಂಜಾ ಜಲಾಶಯ ಪ್ರಾರಂಭಿಸಲು ಒಟ್ಟು ಎಷ್ಟು ಹೆಕ್ಟೇರ್ ಕೃಷಿ ಭೂಮಿಯನ್ನು ರೈತರಿಂದ ಸ್ವಾಧೀನಪಡಿಸಲಾಗಿದೆ | ಕಾರಂಜಾ ಯೋಜನೆಯ ಮುಳುಗಡೆ ಪ್ರದೇಶ ಮತ್ತು ಪುನರ್ವಸತಿ ಕೇಂದ್ರಕ್ಕಾಗಿ ಒಟ್ಟು 17,478 ಎಕರೆ 22 ಗುಂಟೆ ಜಮೀನು ಸ್ವಾಧೀನವಾಗಿರುತ್ತದೆ. |
| ಆ) | ಜಮೀನು ನೀಡಿದ ರೈತರಿಗೆ ಪ್ರತಿ ಎಕರೆಗೆ ಎಷ್ಟು ಪರಿಹಾರ ನೀಡಲಾಗಿದೆ ಹಾಗೂ ಪರಿಹಾರ ನೀಡಬೇಕಾಗಿರುವ ರೈತರ ಸಂಖ್ಯೆ ಎಷ್ಟು (ವಿವರ ನೀಡುವುದು) | 1981 ಮತು 1986ನೇ ಸಾಲಿನಲ್ಲಿ ಸ್ವಾಧೀನ ಪಡಿಸಿಕೊಂಡಿರುವ ಜಮೀನುಗಳಿಗೆ ಪ್ರತಿ ಎಕರೆಗೆ ರೂ.3000.00 ರಂತೆ ಪರಿಹಾರ ಧನವನ್ನು ನೀಡಲಾಗಿದೆ.<br>ಭೂಸ್ವಾಧೀನ ಅಧಿಕಾರಿಗಳು ಪಾವತಿಸಿರುವ ಮಾರುಕಟ್ಟೆ ಬೆಲೆಗೆ ಅಸಂತುಷ್ಟ ಭೂಮಾಲೀಕರು ಭೂಸ್ವಾಧೀನ ಕಾಯ್ದೆ ಕಲಂ 18(1) ರಡಿ ಸಿವಿಲ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ ಪ್ರತಿ ಎಕರೆಗೆ ಪಡೆದುಕೊಂಡಿರುವ ಹೆಚ್ಚುವರಿ ಮಾರುಕಟ್ಟೆ ಬೆಲೆ :<br>1. ಒಣ ಭೂಮಿಗೆ - ರೂ.7,200.00.<br>2. ತರಿ ಭೂಮಿಗೆ - ರೂ.12,000.00<br>3. ನೀರಾವರಿ ಭೂಮಿಗೆ- ರೂ.16,000.00.<br>ಜಿಲ್ಲಾ ಸಿವಿಲ್ ನ್ಯಾಯಾಲಯದಿಂದ ಹೆಚ್ಚುವರಿ ಪರಿಹಾರ ಪಡೆದುಕೊಂಡು ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಮೇಲ್ಮನವಿ ಸಲ್ಲಿಸಿರುವ ರೈತರಿಗೆ ನ್ಯಾಯಾಲಯದ ಆದೇಶದನ್ವಯ ನೀರಾವರಿ ಭೂಮಿಗೆ ಪ್ರತಿ ಎಕರೆಗೆ ರೂ.88,000.00ರಂತೆ, ಪರಿಹಾರ ಧನವನ್ನು ಪಾವತಿಸಲಾಗಿದೆ. |
| ಇ) | ಕಾರಂಜಾ ಸಂತ್ರಸ್ತರು ವೈಜ್ಞಾನಿಕ ಪರಿಹಾರ ನೀಡಲು ಆಗ್ರಹಿಸಿ ಹಲವು ವರ್ಷಗಳಿಂದ ಸರ್ಕಾರಕ್ಕೆ ಒತ್ತಾಯಿಸುತ್ತಿದ್ದಾರೆ; ಈ ವಿಷಯದಲ್ಲಿ ಸರ್ಕಾರದ ನಿಲುವೇನು ? | ದಿನಾಂಕ:19.12.2024 ರಂದು ಅಂದಿನ ಮಾನ್ಯ ಮುಖ್ಯಮಂತ್ರಿಯವರು ಬೆಳಗಾವಿಯ ಸುವರ್ಣ ಸೌಧದಲ್ಲಿ ಕಾರಂಜಾ ಜಲಾಶಯ ಯೋಜನೆಯ ಮುಳುಗಡೆ ಪ್ರದೇಶದ ಸಂತ್ರಸ್ಥರ ಸಮಸ್ಯೆಗಳ ಬಗ್ಗೆ ಚರ್ಚಿಸಲು ನಡೆದ ಸಭೆಯಲ್ಲಿ ಸೂಚಿಸಿರುವಂತೆ, ದಿನಾಂಕ:07.04.2025ರಂದು ಪ್ರಾದೇಶಿಕ ಆಯುಕ್ತರು, ಕಲಬುರಗಿ ರವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ದಿನಾಂಕ:13.11.2025ರಂದು ವರದಿ ನೀಡಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. |

**ಜಸಂಇ 98 ಎಂಎಲ್ಎ 2026**

(ಎನ್. ಚಲುವರಾಯಸ್ವಾಮಿ)
**ಜಲಸಂಪನ್ಮೂಲ ಸಚಿವರು.**